ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 451(599)
ಸದಸ್ಯರ ಹೆಸರು : ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 21-02-2022
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಹಾಗೂ ಪ್ರಾಚಾರ್ಯರ ಹುದ್ದೆ ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು
ಆ)	ಹಾಗಿದ್ದಲ್ಲಿ, ಸರ್ಕಾರ ಇಲ್ಲಿಯವರೆಗೆ ಹುದ್ದೆ ಭರ್ತಿ ಮಾಡಲು ಕೈಗೊಂಡ ಕ್ರಮವೇನು;	ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಈ ಕೆಳಕಂಡಂತೆ ಪ್ರಾಚಾರ್ಯರ ಹುದ್ದೆಗಳನ್ನು ತುಂಬಲು ಈಗಾಗಲೇ ಕ್ರಮವಹಿಸಲಾಗಿದೆ- • ಸರ್ಕಾರದ ಅಧಿಸೂಚನೆ ಸಂಖ್ಯೆ:ಇಪಿ 16 ಡಿಜಿಡಿ 2021, ದಿನಾಂಕ:04-08-2021 ರಲ್ಲಿ ಒಟ್ಟು 06 ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲಾಗಿದೆ. • ಸರ್ಕಾರದ ಅಧಿಸೂಚನೆ ಸಂಖ್ಯೆ:ಇಪಿ 8 ಡಿಜಿಡಿ 2021 ದಿನಾಂಕ:30-10-2021 ಮತ್ತು ದಿನಾಂಕ:27-12-2021ರಲ್ಲಿ ಒಟ್ಟು 14 ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲಾಗಿದೆ. • ಕಲ್ಯಾಣ ಕರ್ನಾಟಕ ವೃಂದದ 39 ಪ್ರಾಂಶುಪಾಲರ ಹುದ್ದೆಗಳು ಸೇರಿದಂತೆ ನೇರ ನೇಮಕಾತಿ ಕೋಟಾದ ಒಟ್ಟು 255 ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬಲು ನೇಮಕಾತಿ ಪ್ರಕ್ರಿಯೆ ನಡೆಸಿ ಅರ್ಹ ಅಭ್ಯರ್ಥಿಗಳ

		ಆಯ್ಕೆಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸುವಂತೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರಿಗೆ ತಿಳಿಸಲಾಗಿದೆ. • ಉಪನ್ಯಾಸಕರ ನೇರ ನೇಮಕಾತಿಗೆ ವಿವಿಧ ವಿಷಯಗಳಿಗೆ ಸಂಬಂಧಪಟ್ಟಂತೆ ಒಟ್ಟು 1439 ಉಪನ್ಯಾಸಕರ ಹುದ್ದೆಗಳನ್ನು ತುಂಬುವ ಪ್ರಸ್ತಾವನೆ ಬಗ್ಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದೆ. ಆರ್ಥಿಕ ಇಲಾಖೆಯ ಸಹಮತಿ ಬಂದ ನಂತರ ಈ ಬಗ್ಗೆ ಕ್ರಮವಹಿಸಲಾಗುವುದು.
ಇ)	ಕಲ್ಯಾಣ ಕರ್ನಾಟಕ ಭಾಗದ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಹಾಗೂ ಪ್ರಾಚಾರ್ಯರ ಹುದ್ದೆಗಳು ಖಾಲಿ ಇವೆ?(ವಿವರ ನೀಡುವುದು)	ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:16-02-2022ಕ್ಕೆ 518 ಉಪನ್ಯಾಸಕ ಹುದ್ದೆಗಳು ಹಾಗೂ 46 ಪ್ರಾಂಶುಪಾಲರ ಹುದ್ದೆಗಳು ಖಾಲಿ ಇರುತ್ತವೆ.

ಸಂಖ್ಯೆ: ಇಪಿ 18 ಡಿಜಿಡಬ್ಲ್ಯೂ 2022

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು